144ನೇ ಅಧಿವೇಶನದ ದಿನಾಂಕ: 20/9/21 ರಂದು ಸದನದಲ್ಲಿ ಚರ್ಚೆಯಾಗಿದೆ. ನಿ-72, ಕ್ರ-49

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ವೀಣಾ ಅಚ್ಚಯ್ಯ ಇವರು ನಿಯಮ 72 ರಡಿ ಮಂಡಿಸಿರುವ ಸೂಚನೆಗೆ ಸರ್ಕಾರದ ಹೇಳಿಕೆ:

**ಸೂಚನೆ:-**

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ಎಸ್.ವೀಣಾ ಅಚ್ಚಯ್ಯ ಇವರು "ಕೊಡಗು ಜಿಲ್ಲೆಯ ಜಮ್ಮಾ ಭೂ ಹಿಡುವಳಿದಾರರ ಹಿತರಕ್ಷಣೆಗೆ ಸರ್ಕಾರ ಸೂಕ್ತ ನಿಯಮಗಳನ್ನು ರೂಪಿಸದೇ ಇರುವುದರಿಂದ ಹಾಗೂ ಜಮ್ಮಾ ಮಲೆಗಳ ಮೇಲಿನ ಹಕ್ಕನ್ನು ಬಿಟ್ಟುಕೊಡಲು ಸಿದ್ಧರಿರುವವರಿಗೆ ಸರ್ಕಾರ ಸೂಕ್ತ ಪರಿಹಾರ ನೀಡಲು ಮುಂದಾಗದೇ ಇರುವುದರಿಂದ ಜಮ್ಮಾ ಭೂ ಹಿಡುವಳಿದಾರರು ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಸಮಸ್ಯೆ" ಕುರಿತು ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯ ಬಯಸುತ್ತೇನೆ.

**ಹೇಳಿಕೆ:-**

ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 79(2) ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು, ಹೈದರಾಬಾದ್ ಪ್ರದೇಶದಲ್ಲಿನ ಮೋಟಸ್ಥಲ್ ತರಿ ಭೂಮಿಗಳು ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರೆಯತಕ್ಕದ್ದು ಎಂದು ತಿಳಿಸಲಾಗಿದ್ದು, ಯಾವುದೇ ಭೂಮಿಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

2021-22 ನೇ ಸಾಲಿನ ಆಯವ್ಯಯ ಭಾಷಣದ ಖಂಡಿಕೆ 306 ರಲ್ಲಿ ಮೂಲ ಗೇಣಿದಾರರು, ಕುಮ್ಕಿ ಜಮೀನು, ಖಾನೇ, ಬಾನೇ, ಡೀಮ್ಡ್ ಅರಣ್ಯ ಸಾಗುವಳಿದಾರರ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಿ ಪರಿಹಾರೋಪಾಯಗಳನ್ನು ಕಂಡುಕೊಳ್ಳಲು ಪ್ರತ್ಯೇಕ ಸಮಿತಿಯನ್ನು ರಚಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.

ಅದರಂತೆ, ಪ್ರತ್ಯೇಕ ಸಮಿತಿಯನ್ನು ರಚಿಸಲು ಕ್ರಮವಹಿಸಲಾಗುತ್ತಿದೆ.

ಆರ್‌ಡಿ 141 ಎಲ್‌ಜಿಕ್ಯೂ 2021

(ಆರ್. ಅಶೋಕ)
ಕಂದಾಯ ಸಚಿವರು.